10 ಗೊಡ್ಡು / ಬಂಜೆ ಜಾನುವಾರುಗಳಿಗೆ ಶಿಬಿರದ ವ್ಯವಸ್ಥೆ

ಪ್ರಸಕ್ತ ಸಾಲಿನಲ್ಲಿ ರೂ 51 61 ಲಕ್ಷಗಳ ಅನುದಾನದೊಂದಿಗೆ ಗೊಡ್ಡು ಜಾನುವಾರು ಶಿಬಿರಗಳನ್ನು ಏರ್ಪಡಿಸುವುದು ಹಾಗೂ ರೈತರಲ್ಲಿ ಜಾನುವಾರುಗಳಲ್ಲಿನ ಬಂಜೆನತದ ಬಗ್ಗೆ ಅರಿವು ಮೂಡಿಸುವುದು ಇತ್ಯಾದಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ

11 ಟಗರು ಮತ್ತು ಹಂದಿ ಸರಬರಾಜು

ಕುರಿ ಮತ್ತು ಹಂದಿ ಅಭಿವೃದ್ಧಿಗಾಗಿ ರೂ 4 97 ಲಕ್ಷ ವೆಚ್ಚದಲ್ಲಿ ಆಯ್ದ ಐದು ಜಿಲ್ಲೆಗಳಲ್ಲಿ ಉತ್ತಮ ಗುಣಮಟ್ಟದ ಟಗರು ಮತ್ತು ಹಂದಿಗಳನ್ನು ದುರ್ಬಲ ವರ್ಗದ ಜನರಿಗೆ ಸರಬರಾಜು ಮಾಡಲು ಉದ್ದೇಶಿಸಲಾಗಿದೆ

65 (181) ಶ್ರೀ ಬಾಲರಾಜ್ ಎಸ್ (ಕೊಳ್ಳೇಗಾಲ) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಕೊಳ್ಳೇಗಾಲ ಕ್ಷೇತ್ರದ ಯಳಂದೂರು ಮತ್ತು ಕೊಳ್ಳೇಗಾಲ ತಾಲ್ಲೂಕುಗಳಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಪ್ರಾರಂಭಿಸಲು ಕೋರಿಕೆ ಬಂದಿದೆಯೇ ,

ಆ) ಹಾಗಿದ್ದಲ್ಲಿ, ಯಾವಾಗ ಮಂಜೂರು ಮಾಡಲಾಗುವುದು ,

ಇ) ಮಂಜೂರು ಮಾಡದಿದ್ದಲ್ಲಿ, ಅದಕ್ಕೆ ಕಾರಣಗಳೇನು ,

ಈ) ಕೊಳ್ಳೇಗಾಲ ಸಾರ್ವಜನಿಕ ಆಸ್ಪತ್ರೆಯಲ್ಲಿ ರಕ್ತ ನಿಧಿಯನ್ನು ಸ್ಥಾಪನೆ ಮಾಡಲು ಸರ್ಕಾರ ಉದ್ದೇಶಿಸಿದೆಯೇ ,

ಉ) ಉದ್ದೇಶಿಸಿದ್ದಲ್ಲಿ, ಈ ಸಾಲಿನಲ್ಲಿ ಪ್ರಾರಂಭಿಸಲಾಗುವುದು ?

ಶ್ರೀ ಆರ್ ಅಶೋಕ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಬಂದಿದೆ

ಆ) ಅಗತ್ಯಕ್ಕಿಂತ ಹೆಚ್ಚಿನ ಆಸ್ಪತ್ರೆಗಳು ಇರುವುದರಿಂದ ಹೊಸದಾಗಿ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮಂಜೂರು ಮಾಡಲು ಅವಕಾಶವಿರುವುದಿಲ್ಲ

ಇ) ಯಳಂದೂರು ಮತ್ತು ಕೊಳ್ಳೇಗಾಲ ತಾಲ್ಲೂಕುಗಳಲ್ಲಿ ಈಗಾಗಲೇ ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ ಆದ್ದರಿಂದ ಹೆಚ್ಚಿನ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಪ್ರಾರಂಭಿಸುವ ಅವಕಾಶವಿರುವುದಿಲ್ಲ

ಇ) ರಕ್ತ ಸಂಗ್ರಹಾಲಯವನ್ನು ಸ್ಥಾಪಿಸಲು ಕ್ರಮ ಕೈಗೊಳ್ಳಲಾಗುತ್ತಿದೆ

ಈ) ಮಂಜೂರಾತಿ ನಂತರ ಪ್ರಾರಂಭಿಸಲಾಗುವುದು

66 (182) ಶ್ರೀ ಬಾಲರಾಜ್ ಎಸ್ (ಕೊಳ್ಳೇಗಾಲ) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಕೊಳ್ಳೇಗಾಲ ತಾಲ್ಲೂಕು ತುಂಬಾ ದೊಡ್ಡ ತಾಲ್ಲೂಕು ಆಗಿದ್ದು, ಜನಸಂಖ್ಯೆಗೆ ಅನುಗುಣವಾಗಿ ಆಸ್ಪತ್ರೆ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ,